ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿ.ಜೆ.ಎಂ.,
ನ್ಯಾಯಾಲಯ, ಚಿಕ್ಕಮಗಳೂರು.

<u>ಸಿ.ಸಿ.1084/2024</u>

| | | | |
|---|---|---|---|
| ಸಾಕ್ಷಿದಾರರ ಹೆಸರು | : | ವಿಶ್ವನಾಥ | ಪಿ.ಡಬ್ಲ್ಯೂ.6 |
| ತಂದೆಯ ಹೆಸರು | : | ಚಂದ್ರಪ್ಪ ಎನ್ | ಸಿ.ಡಬ್ಲ್ಯೂ.9 |
| ವಯಸ್ಸು | : | 36 ವರ್ಷ | |
| ವೃತ್ತಿ | : | ಪಿ.ಎಸ್.ಐ, ಲಕ್ಕುವಳ್ಳಿ ಪೊಲೀಸ್ ಠಾಣೆ | |
| ವಾಸ | : | ಚಿಕ್ಕಮಗಳೂರು | |

<u>ದಿನಾಂಕಃ 01-06-2026 ರಂದು ಪ್ರಮಾಣ ವಚನ ಭೋದಿಸಲಾಯಿತು.</u>

<u>ಮುಖ್ಯ ವಿಚಾರಣೆಃ ಅಭಿಯೋಜನೆ ಪರ ಮಾನ್ಯ ಎಪಿಪಿ ರವರಿಂದಃ-</u>

ನಾನು ಫೆಬ್ರವರಿ 2023 ರಿಂದ ದಿಃ07.06.2023 ರವರೆಗೆ ಸಿ.ಇ.ಎನ್ ಪೊಲೀಸ್ ಠಾಣೆಯಲ್ಲಿ ಪಿ.ಎಸ್.ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ11.04.2023 ರಂದು ಚಾಸಾ-1 ರವರಿಂದ ಈ ಕೇಸಿನ ಕಡತವನ್ನು, ವರದಿಯನ್ನು, ಮಹಜರ್ ಅನ್ನು ಹಾಗೂ ಪಿ.ಎಫ್. ಅನ್ನು ಪಡೆದಿರುತ್ತೇನೆ. ವರದಿಯನ್ನು ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ-8 ಎಂದು ಗುರುತಿಸಲಾಗಿದ್ದು ನನ್ನ ಸಹಿ ನಿಪಿ-8(ಬಿ) ಇರುತ್ತದೆ. ಅದೇ ದಿನ ವಶಪಡಿಸಿಕೊಂಡ ಮಾಲನ್ನು ಠಾಣಾ ಪಿ.ಎಫ್.ಗೆ ಅಳವಡಿಸಿ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ.

ದಿಃ12.04.2023 ರಂದು ಚಾಸಾ-5 ರವರಿಂದ 65(ಬಿ) ದೃಢೀಕರಣ ಪತ್ರವನ್ನು ಪಡೆದಿರುತ್ತೇನೆ. ದೃಢೀಕರಣ ಪತ್ರವನ್ನು ಅದನ್ನು ಈಗಾಗಲೇ ನಿಪಿ-10 ಎಂದು ಗುರುತಿಸಲಾಗಿದ್ದು ನನ್ನ ಸಹಿ ನಿಪಿ-10(ಬಿ) ಇರುತ್ತದೆ. ಅದೇ ದಿನ ಚಾಸಾ-2 ರಿಂದ ಚಾಸಾ-5 ರವರ ಹೇಳಿಕೆಯನ್ನು ಪಡೆದಿರುತ್ತೇನೆ. ದಿಃ15.04.2023 ರಂದು ವಶಪಸಿಕೊಂಡ ಮುದ್ದೆ ಮಾಲನ್ನು ರಾಸಾಯನಿಕ ಪರೀಕ್ಷೆಗೆ ಚಾಸಾ-5 ರವರ ಮೂಲಕ ಕಳುಹಿಸಿಕೊಟ್ಟಿರುತ್ತೇನೆ. ಮನವಿಯನ್ನು ನೋಡುತ್ತಿದ್ದು ಅದನ್ನು ನಿಪಿ-12 ಎಂದು ಗುರುತಿಸಲಾಗಿ ನನ್ನ ಸಹಿ ನಿಪಿ-12(ಎ) ಇರುತ್ತದೆ. ನಾನು ವರ್ಗಾವಣೆಗೊಂಡಿದ್ದರಿಂದ ಈ ಕೇಸಿನ ಕಡತವನ್ನು ಚಾಸಾ-10 ರವರಿಗೆ ವರ್ಗಾಯಿಸಿರುತ್ತೇನೆ. ಈ ದಿನ ನ್ಯಾಯಾಲಯದ ಮುಂದೆ ಇರುವ ಮು.ಮಾ.1 ರಿಂದ 3 ನ್ನು ನೋಡಿ ಗುರುತಿಸುತ್ತೇನೆ.

ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ-

ನಾನು ಯಾವುದೇ ಸಾಕ್ಷಿದಾರರ ಹೇಳಿಕೆಗಳನ್ನು ಪಡೆದಿರುವುದಿಲ್ಲ ಎಂದರೆ ಸರಿಯಲ್ಲ. ಮು.ಮಾ.3 ನಗದು ಹಣದ ಡಿನಾಮಿನೇಷನ್ ಅನ್ನು ಮಹಜರ್ ನಲ್ಲಿ ಬರೆದಿರುವುದಿಲ್ಲ. ಅದೇ ರೀತಿ ಸದರಿ ನಗದು ಹಣದ ನಂಬರ್ ಅನ್ನೂ ಕೂಡಾ ನಮೂದು ಮಾಡಿರುವುದಿಲ್ಲ ಎಂದರೆ ಸರಿ. ಮು.ಮಾ.1 ರಿಂದ 3 ರ ಮೇಲೆ ನಾನು ಸಹಿಯನ್ನು ಮಾಡಿರುವುದಿಲ್ಲ. ನ್ಯಾಯಾಲಯದ ಮುಂದೆ ಸುಳ್ಳು ಪಿ.ಎಫ್ ಅನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ಯಾವುದೇ ಮುದ್ದೆ ಮಾಲನ್ನು ರಾಸಾಯನಿಕ ಪರೀಕ್ಷೆಗೆ ಕಳುಹಿಸಿಲ್ಲ ಎಂದರೆ ಸರಿಯಲ್ಲ. ಆರೋಪಿಗೂ ಮು.ಮಾ.1 ರಿಂದ 3 ಕ್ಕೂ ಯಾವುದೇ ಸಂಬಂಧ

ಇಲ್ಲ ಎಂದರೆ ಸರಿಯಲ್ಲ. ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಮರು ವಿಚಾರಣೆಃ ಇಲ್ಲಾ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)
ಓಃಹೇಃಕೇಃಸಃಇಃಎಃಒಃ

ಸಹಿ/-
ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು,
ಮತ್ತು ಸಿ.ಜೆ.ಎಂ.,ಚಿಕ್ಕಮಗಳೂರು.

ಎಸ್ಆರ್ಃ